# ಆನೆಗೊಂದಿ ಉತ್ಸವ: ಗಮನ ಸೆಳೆದ ವಿವಿಧ ವಸ್ತು ಪ್ರದರ್ಶನ ಮಳಿಗೆಗಳು





ಕೊಪ್ಪಳ ಮಾರ್ಚ್ 11–: ಆನೆಗೊಂದಿ ಉತ್ಸವ–2024ರ ಪ್ರಯುಕ್ತ ಶ್ರೀ ರಂಗದೇವರಾಯಲು ವೇದಿಕೆ ಮುಂಭಾಗದಲ್ಲಿ ಆಯೋಜಿಸಿದ್ದ ವಿವಿಧ ವಸ್ತುಗಳ ಪ್ರದರ್ಶನ ಮಳಿಗೆಗಳು ಸಾರ್ವಜನಿಕರ ಗಮನ ಸೆಳೆದವು.

ಈ ವಸ್ತು ಪ್ರದರ್ಶನ ಮಳಿಗೆಗಳಲ್ಲಿ ದಿ ಕಿಷ್ಕಿಂದ ಟ್ರಸ್ಟ ವತಿಯಿಂದ ಮೆಕ್ಕೆಜೋಳ, ಬಾಳೆ ಮತ್ತು ಇತರೆ ಒಣಗಿದ ಎಲೆಗಳಿಂದ ಮಾಡಿದ ಗೃಹಲಂಕಾರ ವಸ್ತುಗಳ ಪ್ರದರ್ಶನ, ಬಂಗಾಲಿ ಟ್ರಸ್ಟ್ ವತಿಯಿಂದ ವಿವಿಧ ಖಾದ್ಯಗಳ ಪ್ರದರ್ಶನ ಮತ್ತು ಮಾರಾಟ, ಗಂಗಾವತಿಯ ಪ್ರಜಾಪಿತ ಬ್ರಹ್ಮಕುಮಾರಿ ವತಿಯಿಂದ ಆದ್ಯಾತ್ಮ ಚಿತ್ರದ ಪ್ರದರ್ಶನ ಮತ್ತು ಪುಸ್ತಕಗಳ ಪ್ರದರ್ಶನ ಹಾಗೂ ಮಾರಟ, ಗಂಗಾವತಿಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯದಿಂದ ಅಂಗನವಾಡಿಯ ಮಕ್ಕಳ ಆಟಿಕೆ ವಸ್ತು ಹಾಗೂ ಇತರೆ ವಸ್ತುಗಳ ಪ್ರದರ್ಶನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಖಿ ಒನ್ ಸ್ಟಾಪ್ ಸೆಂಟರಿನ ಸೇವೆಗಳು, ಪಂಪಾವಿರೂಪಾಕ್ಷೇಶ್ವರ ಸ್ವ-ಸಹಾಯ ಸಂಘದಿಂದ ವಿವಿಧ ಅಡುಗೆ ಪದಾರ್ಥ ಪದರ್ಶನ ಮತ್ತು ಮಾರಾಟ,

ಧಾತ್ರಿ ಸ್ವ-ಸಹಾಯ ಸಂಘ ವತಿಯಿಂದ ಮುಂಬತ್ತಿ ಮತ್ತು ಕೈಚೀಲಗಳ ಪ್ರದರ್ಶನ ಮತ್ತು ಮಾರಾಟ, ಆರೋಗ್ಯ ಇಲಾಖೆಯಿಂದ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಅರಿವು ಮತ್ತು ಪ್ರದರ್ಶನ ಮಳಿಗೆ ಹಾಗೂ ಸ್ವ-ಸಹಾಯ ಗುಂಪುಗಳ ಸದಸ್ಯರು ತಯಾರಿಸಿದ ವಿವಿಧ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಸೇರಿದಂತೆ ಒಟ್ಟು 24 ಪ್ರದರ್ಶನ ಮಳಿಗೆಗಳನ್ನು ಸ್ಥಾಪಿಸಲಾಗಿದೆ.

# ಆನೆಗೊಂದಿ ಉತ್ಸವ: ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಣೆ




ಕೊಪ್ಪಳ ಮಾರ್ಚ್ 11– ಆನೆಗೊಂದಿ ಉತ್ಸವ–2024ರ ಅಂಗ 'ವಾಗಿ ಆನೆಗೊಂದಿಯ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ಭಾನುವಾರ ನಡೆದ ಹ್ಯಾಂಡ್ ಬಾಲ್, ಬಾಲ್ ಬ್ಯಾಡ್ಮಿಂಟನ್ ಹಾಗೂ ಇತರೆ ಕ್ರೀಡೆಗಳಲ್ಲಿ ವಿಜೇತರಾದ ತಂಡಗಳಿಗೆ ಗಂಗಾವತಿ ಶಾಸಕರಾದ ಜಿ.ಜನಾರ್ಧನ ರೆಡ್ಡಿ ಅವರು ಬಹುಮಾನ ವಿತರಣೆ ಮಾಡಿದರು.ಈ ಸಂದರ್ಭದಲ್ಲಿ ಕೊಪ್ಪಳ ಉಪವಿಭಾಗಾಧಿ ಕಾರಿಗಳಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಗಂಗಾವತಿ ತಹಶೀಲ್ದಾರ ರಾದ ಯು.ನಾಗರಾಜ, ಆನೆಗೊಂದಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಮಹದೇವಿ, ಉಪಾಧ್ಯಕ್ಷರಾದ ಪೂರ್ಣಿಮಾ ಸೇರಿದಂತೆ ಜನಪ್ರತಿನಿಧಿಗ ಳು,

ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು. ಹ್ಯಾಂಡ್ ಬಾಲ್ ಸ್ಪರ್ಧೆಯಲ್ಲಿ ಗಂಗಾವತಿ ತಂಡವು ಪ್ರಥಮ ಸ್ಥಾನವನ್ನು ಪಡೆದುಕೊಂಡಿದೆ.ಗಂಗಾವತಿ ಮತ್ತೊಂದು ತಂಡ ವಿದ್ಯಾನಗರದ ತಂಡವು ದ್ವಿತೀಯ ಸ್ಥಾನ ಪಡೆದರೆ, ಕಲಬುರಗಿಯ ತಂಡವು ತೃತಿಯ ಸ್ಥಾನವನ್ನು ಪಡೆದಿದೆ. ಬಾಲ್ ಬ್ಯಾಡ್ಮಿಂಟನ್ ಸ್ಪರ್ಧೆಯಲ್ಲಿ ಗಂಗಾವತಿಯ ಸಿಬಿಎಸ್ ತಂಡವು ಪ್ರಥಮ ಸ್ಥಾನವನ್ನು ಪಡೆದುಕೊಂಡಿದೆ. ಕೊಪ್ಪಳದ ತಂಡ ದ್ವಿತೀಯ ಸ್ಥಾನ ಪಡೆದರೆ, ಬಳ್ಳಾರಿಯ ತಂಡವು ತೃತಿಯ ಸ್ಥಾನವನ್ನು ಪಡೆದಿದೆ ಎಂದು ಆನೆಗೊಂದಿ ಉತ್ಸವದ ಕ್ರೀಡಾ ಸಮಿತಿ ಪ್ರಕಟಣೆ ತಿಳಿಸಿದೆ.

## ಇಂದು ಬೆಳಗಾವಿಗೆ ಡಾ. ಶಿವರಾಜಕುಮಾರ ಆಗಮನ

ಬೆಳಗಾವಿ:ಕರಟಕ ದಮನಕ ಕನ್ನಡ ಸಿನಿಮಾ ಬಿಡುಗಡೆಯಾಗಿ ಅದ್ದೂರಿಯಾಗಿ ಪ್ರದರ್ಶನವಾಗುತ್ತಿರುವ ಹಿನ್ನೆಲೆಯಲ್ಲಿ ಮಂಗಳವಾರ ಬೆಳಗಾವಿಯ ಪ್ರಕಾಶ ಚಿತ್ರ ಮಂದಿರಕ್ಕೆ ನಟ ಡಾ. ಶಿವರಾಜಕುಮಾರ ಆಗಮಿಸಲಿದ್ದಾರೆ ಎಂದು ಬೆಳಗಾವಿ ನಿತಿನ್ ಹೇಳಿದರು.ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಡಾ. ಶಿವರಾಜಕುಮಾರ ಜೊತೆಗೆ ಕರಟಕ ದಮನಕ ಕನ್ನಡ ಸಿನಿಮಾ ತಂಡ ಯೋಗರಾಜ್ ಭಟ್ ಸಹ ಅಗಮಿಸಲಿದ್ದಾರೆ.ಮಂಗಳವಾರ ಬೆಳಗ್ಗೆ ಚನ್ನಮ್ಮ ವೃತ್ತಕ್ಕೆ ಮಾಲಾರ್ಪಣೆ ಮಾಡಿ ಪ್ರಕಾಶ ಚಿತ್ರಮಂದಿರಕ್ಕೆ ತೆರಳಿ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ ಎಂದರು.

# ಬೆಳಗಾವಿ ನೀರಾವರಿ ಇಲಾಖೆ ವಿರುದ್ಧ ರೊಚ್ಚಿಗೆದ್ದ ಮಾಸ್ತಿಹೋಳಿ ರೈತರ ಪ್ರತಿಭಟನೆ




ಬೆಳಗಾವಿ: ನಗರದಲ್ಲಿ ಹಿಡಕಲ್ ಡ್ಯಾಮ್ ಹಿನ್ನೀರಿಗೆ ಜಮೀನು ಕಳೆದುಕೊಂಡ ರೈತರಿಗೆ ನೀರಾವರಿ ಇಲಾಖೆಯಿಂದ ಪರಿಹಾರ ಕೊಡುವಂತೆ ಆಗ್ರಹಿಸಿ ನೂರಾರು ರೈತರು ಚನ್ನಮ್ಮ ವೃತ್ತದಲ್ಲಿ ಎತ್ತಿನ ಗಾಡಿಯೊಂದಿಗೆ ಬೃಹತ್ ಪ್ರತಿಭಟನೆ ನಡೆಸಿ ನೀರಾವರಿ ಇಲಾಖೆಗೆ ಮುತ್ತಿಗೆ ಹಾಕಲು ಯತ್ನಿಸಿದರು.ಬೆಳಗಾವಿ ಜಿಲ್ಲೆ ಹುಕ್ಕೇರಿ ತಾಲೂಕಿನ ಮಾಸ್ತಿಹೊಳಿ, ಗ್ರಾಮದ ರೈತರು ಹಲವಾರು ಬಾರಿ ಹೋರಾಟ ಮಾಡಿದರೂ ನೀರಾವರಿ ಇಲಾಖೆ ಪರಿಹಾರ ಕೊಟ್ಟಿಲ್ಲ ಎಂದು ಹಿಡಕಲ್ ಡ್ಯಾಮ್ ಕರ್ನಾಟಕ ನೀರಾವರಿ ನಿಗಮದ ಅಧಿಕಾರಿಗಳು ವಿರುದ್ಧ ರೈತರು ಆಕ್ರೋಶ ವ್ಯಕ್ತಪಡಿಸಿದರು.396 ಎಕರೆ ಜಮೀನಗೆ ಪರಿಹಾರ ನೀಡುವಂತೆ ಕಚೇರಿಯಿಂದ ಕಚೇರಿಗೆ ಅಲೆದಾಡಿ ದರೂ ಎರಡು ವರ್ಷಗಳ ಹಿಂದೆಯೇ ಪರಿಹಾರ ನೀಡುವಂತೆ ಹೈಕೋ ರ್ಟ್ ಆದೇಶ ನೀಡಿದರೂ ಇಲ್ಲಿಯವರೆಗೂ ಪರಿಹಾರ ನೀಡಿಲ್ಲ ಎಂದ ಹರಿಹಾಯ್ದರು ಇನ್ನೂ ನೀರಾವರಿ ಇಲಾಖೆಗೆ ದನಕರು ಗಳೊಂದಿಗೆ ಆಗಮಿಸಿ ಮುತ್ತಿಗೆ ಹಾಕಲು ರೈತರು ಯತ್ನಿಸಿದರುಮಾಸ್ತಿಹೊಳಿ ಗ್ರಾಮದ ರೈತ ಮುಖಂಡ ಬಾಳೇಶ ಮಾವನೂರಿ ಮಾತನಾಡಿ ಸಚಿವರು ಫೆ.28 ರಂದು ಉಸ್ತುವಾರಿ ಮೇಲಾಧಿಕಾರಿಗಳ ಅನುಮತಿ ಪಡೆದಿದು ಪ್ರಸ್ತಾವನೆ ಸಲ್ಲಿಸುತ್ತೇನೆ ಎಂದು ಹೇಳಿದ್ದರು ಅದೂ ಮಾಡಿಲ್ಲ.ಪ್ರಸ್ತಾವನೆ ಸಲ್ಲಿಸುವರಗೆ ನಾವೂ ಪ್ರತಿಭಟನೆ ಹಿಂಪಡೆದುವುದಿಲ್ಲ ನಮ್ಮ ಕುಟುಂಬಕ್ಕೆ ತೊಂದರೆಯಾದರೆ ಎಂ.ಡಿ.ರಾಜೇಶ್, ಬಿ.ಆರ್.ರಾಠೋಡ್ ಮುಖ್ಯ ಹೊಣೆಗಾರು ಆಗುತ್ತಾರೆ, ನಕಲಿ ದಾಖಲಾತಿ ಸಲ್ಲಿಸಿದ ಅಧಿಕಾರಿಗಳ ವಿರುದ್ದ ಎಫ್ ಐ ಆರ್ ದಾಖಲು ಆಗಬೇಕೆಂದು ಆಕ್ರೋಶ ವ್ಯಕ್ತಪಡಿಸಿದರು .

# ಬೆಳಗಾವಿ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ . ಇದರ 13 ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆ

ಬೆಳಗಾವಿ: ಬರುವ ದಿನಾಂಕ 17 ರಂದು ಜರುಗುವ ಬೆಳಗಾವಿ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನ. ಬೆಳಗಾವಿ ಇದರ ಆಡಳಿತ ಮಂಡಳಿಯ ಚುನಾವಣೆಯಲ್ಲಿ ಅರಭಾವಿ ಶಾಸಕ ಮತ್ತು ಕೆಎಂಎಫ್ ನಿಕಟಪೂರ್ವ ಅಧ್ಯಕ್ಷ, ನಿರ್ದೇಶಕ ಬಾಲಚಂದ್ರ ಜಾರಕಿಹೊಳಿ ಅವರ ನೇತೃತ್ವದ 13 ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ವಿವೇಕರಾವ್ ಪಾಟೀಲ (ರಾಯಬಾಗ), ಬಾಲಚಂದ್ರ ಲಕ್ಷ್ಮಣರಾವ್ ಜಾರಕಿಹೊಳಿ (ಗೋಕಾಕ್), ಮಲ್ಲಪ್ಪ ಬಾಳಪ್ಪ ಪಾಟೀಲ (ಮೂಡಲಗಿ), ಕಲ್ಲಪ್ಪ ನಿಂಗಪ್ಪ ಗಿರೆನ್ನವರ (ಬೆಳಗಾವಿ), ಡಾ. ಬಸವರಾಜ ಮ. ಪರವಣ್ಣನವರ (ಕಿತ್ತೂರು), ಬಾಬುರಾವ ಸತ್ತೆಪ್ಪ ವಾಘಮೋಡೆ (ಕಾಗವಾಡ), ವಿರೂಪಾಕ್ಷಿ ಬಾಳಪ್ಪ ಈಟಿ (ಚಿಕ್ಕೋಡಿ), ರಾಯಪ್ಪ ಬಾಳಪ್ಪ ಡೂಗ (ಹುಕ್ಕೇರಿ), ಪ್ರಕಾಶ ಯಲ್ಲಪ್ಪ ಅಂಬೋಜಿ (ಖಾನಾಪುರ), ಸಂಜಯ ಶ್ರೀಶೈಲಪ್ಪ ಶಿಂತ್ರೆ (ನಿಪ್ಪಾಣಿ), ಸದೆಪ್ಪ ಬಸಲಿಂಗಪ್ಪ ವಾರಿ (ಸವದತ್ತಿ), ಶಂಕರ ಕೆಂಚಪ್ಪ ಇಟ್ನಾಳ (ಯರಗಟ್ಟಿ), ಸವಿತಾ ಸುರೇಶ ಖಾನಪ್ಪಗೋಳ (ಮೂಡಲಗಿ–ಮಹಿಳಾ) ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿಯಾಗಿದ್ದ ಬೆಳಗಾವಿ ರಾಣಿ ಚೆನ್ನಮ್ಮ ವಿಶ್ವ ವಿದ್ಯಾಲಯದ ರಿಜಿಸ್ಟ್ರಾರ್ ರಾಜಶ್ರೀ ಜೈನಾಪುರ ಪ್ರಕಟಿಸಿದರು. ಇನ್ನು ಅಥಣಿ, ಬೈಲಹೊಂಗಲ ಮತ್ತು ರಾಮದುರ್ಗ ಕ್ಷೇತ್ರಗಳಿಗೆ ತಲಾ ಒಂದೊಂದು ಸ್ಥಾನಗಳಿಗೆ ಬರುವ ಭಾನುವಾರ 17 ರಂದು ಚುನಾವಣೆ ನಡೆಯಲಿದೆ ಎಂದು ಜೈನಾಪುರ ತಿಳಿಸಿದರು.

ನಾಮಪತ್ರಗಳನ್ನು ವಾಪಸ್ಸು ಪಡೆಯಲು ಇಂದು ಸೋಮವಾರದಂದು ಕಡೆಯ ದಿನವಾಗಿತ್ತು. ನೂತನವಾಗಿ ಅವಿರೋಧವಾಗಿ ಆಯ್ಕೆಯಾದ ನಿರ್ದೇಶಕ ಮಂಡಳಿಯವರನ್ನು ಇದೇ ಸಂದರ್ಭದಲ್ಲಿ ಅವರು ಅಭಿನಂದಿಸಿದರು.

ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘದ ಅಭಿವೃದ್ಧಿಗೆ ಕ್ರಮ– ಬಾಲಚಂದ್ರ ಜಾರಕಿಹೊಳಿ

ಬೆಳಗಾವಿ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ಅಭಿವೃದ್ಧಿಗೆ ಸಹಕಾರಿ ತತ್ವದಡಿ ಶ್ರಮಿಸುವುದಾಗಿ ಆಡಳಿತ ಮಂಡಳಿಯ ಚುನಾವಣೆಯ ನೇತೃತ್ವ ವಹಿಸಿರುವ ಶಾಸಕ ಮತ್ತು ಕೆಎಂಎಫ್ ನಿರ್ದೇಶಕ ಬಾಲಚಂದ್ರ ಜಾರಕಿಹೊಳಿ ಅವರು ತಿಳಿಸಿದರು.

ಇದೇ ದಿ. 17 ರಂದು ಜಿಲ್ಲಾ ಹಾಲು ಒಕ್ಕೂಟಕ್ಕೆ ಚುನಾವಣೆ ನಿಗದಿಯಾಗಿದ್ದು, ರೈತರು ಮತ್ತು ಸಹಕಾರಿಗಳ ಸಹಕಾರದಿಂದ ಒಟ್ಟು



16 ಸ್ಥಾನಗಳ ಪೈಕಿ 13 ಸ್ಥಾನಗಳಿಗೆ ಅವಿರೋಧವಾಗಿ ಆಯ್ಕೆ ನಡೆದಿದೆ. ಕಳೆದ ಮೂರು ಅವಧಿಗಳಿಂದ ಈ ಒಕ್ಕೂಟದ ಆಡಳಿತ ಮಂಡಳಿಯ ಸದಸ್ಯರ ಸಹಕಾರದೊಂದಿಗೆ ಅವಿರೋಧವಾಗಿ ಆಯ್ಕೆ ನಡೆದಿದೆ. ಈ ಬಾರಿಯೂ ಎಲ್ಲ ಸ್ಥಾನಗಳಿಗೆ ಅವಿರೋಧ ಆಯ್ಕೆಗೆ ಪ್ರಯತ್ನಿಸಲಾಗುತ್ತಿದೆಯಾದರೂ ಕೆಲವರಲ್ಲಿ ಹೊಂದಾಣಿಕೆ ಕೊರತೆಯಿಂದ ಮೂರು ಸ್ಥಾನಗಳಿಗೆ ಚುನಾವಣೆ ನಡೆಯಲಿದೆ. ಈ ಮೂರೂ ಸ್ಥಾನಗಳು ಸಹ ತಮ್ಮ ನೇತೃತ್ವದ ಅಭ್ಯರ್ಥಿಗಳು ಆಯ್ಕೆಯಾಗಲಿದ್ದಾರೆ. ಸಹಕಾರ ತತ್ವಗಳನ್ನು ಪಾಲನೆ ಮಾಡಿಕೊಂಡು ಹಾಲು ಒಕ್ಕೂಟದ ಪ್ರಗತಿಗೆ ಶ್ರಮಿಸುತ್ತಿರುವ ರೈತರ ಸಂಸ್ಥೆಗೆ ಪಕ್ಷಾತೀತ ಮತ್ತು ಜಾತ್ಯತೀತವಾಗಿ ಚುನಾವಣೆಯನ್ನು ನಡೆಸಲಾಗಿದೆ. ಇದರಲ್ಲಿ ಕಾಂಗ್ರೆಸ್, ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಮುಖಂಡರು ಸಹ ಸಹಕಾರ ನೀಡಿದ್ದಾರೆ. ಅದರಲ್ಲಿಯೂ ರಾಜ್ಯ ಸರ್ಕಾರದ ಸಚಿವರುಗಳ ಸಹ ನಮಗೆ ಅಗತ್ಯವಿರುವ ಎಲ್ಲ ಬೆಂಬಲವನ್ನು ನೀಡುವ ಮೂಲಕ ಅವಿರೋಧವಾಗಿ ಆಯ್ಕೆಯಾಗಲು ಸಹಕರಿಸಿದ್ದಾರೆ. ಅವರಿಗೂ, ವಿವಿಧ ಪಕ್ಷಗಳ ಮುಖಂಡರಿಗೂ ಬಾಲಚಂದ್ರ ಜಾರಕಿಹೊಳಿ ಅವರು ಕೃತಜ್ಞತೆಯನ್ನು ಸಲ್ಲಿಸಿದರು. ಮುಂದಿನ ಐದು ವರ್ಷಗಳ ಅವಧಿಯಲ್ಲಿ ಬೆಳಗಾವಿ ಜಿಲ್ಲಾ ಹಾಲು ಒಕ್ಕೂಟವನ್ನು ರಾಜ್ಯದಲ್ಲಿಯೇ ಮಾದರಿಯನ್ನಾಗಿ ಮಾಡಲಾಗುವುದು. ರೈತರು, ಹಾಲು ಉತ್ಪಾದಕರು ಮತ್ತು ನೌಕರರ ಆಶಯದಂತೆ ಒಕ್ಕೂಟದ ಬಲವರ್ಧನೆಗೆ ಸಹಕಾರ ತತ್ವದಡಿ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಕಾರ್ಯ ನಿರ್ವಹಿಸುವುದಾಗಿ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಹೇಳಿದರು.

# 'ಆನೆಗೊಂದಿ ಪರಂಪರೆ & ಅಭಿವೃದ್ಧಿ' ವಿಚಾರಗೋಷ್ಠಿ

# ಆನೆಗೊಂದಿ ಇತಿಹಾಸ ಯುವ ಪೀಳಿಗೆಗೆ ತಿಳಿಸಿ: ಜಿ.ಜನಾರ್ಧನ ರೆಡ್ಡಿ



ಕೊಪ್ಪಳ ಮಾರ್ಚ್ 11 : ವಿಚಾರ ಗೋಷ್ಠಿ ಮೂಲಕ ಆನೆಗೊಂದಿ ಇತಿಹಾಸದ ಬಗ್ಗೆ ಇಂದಿನ ಯುವ ಸಮುದಾಯ ಮತ್ತು ಹೊಸ ಪೀಳಿಗೆಗೆ ತಿಳಿಸುವ ಕೆಲಸವಾಗಬೇಕು ಎಂದು ಗಂಗಾ ವತಿ ಶಾಸಕರಾದ ಜಿ.ಜನಾರ್ಧನ ರೆಡ್ಡಿ ಅವರು ಹೇಳಿದರು. ಆನೆಗೊಂದಿ ಉತ್ಸವ–2024ರ ಪ್ರಯುಕ್ತ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪ್ರವಾಸೋದ್ಯಮ ಇಲಾಖೆ, ಬೆಂಗಳೂರು ಹಾಗೂ ಕೊಪ್ಪಳ ಜಿಲ್ಲಾಡಳಿತದ ಸಹಯೋಗದಲ್ಲಿ ಆನೆಗೊಂದಿಯ ಗಗನ್ ಮಹಲ್ ಹತ್ತಿರದ ಶಬರಿ ವೇದಿಕೆಯಲ್ಲಿ ಮಾರ್ಚ್ 11ರಂದು ಏರ್ಪಡಿಸಲಾದ "ಆನೆಗೊಂದಿ ಪರಂಪರೆ ಮತ್ತು ಅಭಿವೃದ್ಧಿ" ವಿಳಯದ ವಿಚಾರಗೋಷ್ಠಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ವಿಜಯನಗರ ಸಾಮ್ರಾಜ್ಯದ ಮೊದಲ ರಾಜಧಾನಿಯಾಗಿರುವ ಆನೆಗೊಂದಿ ಉತ್ಸವ ಆಚರಣೆಗೆ ಬಹಳಷ್ಟು ಕಡಿಮೆ ಸಮಯದಲ್ಲಿ ನಿರ್ಧಾರ ಮಾಡಿದ್ದರೂ ಸಹ ಉತ್ಸವ ಆಚರಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ತಂಗಡಗಿ ಅವರು ಸಹ ಹಂಪಿ ಉತ್ಸವದ ಬಳಿಕ ಆನೆಗೊಂದಿ ಉತ್ಸವವನ್ನು ಮಾಡಲೇ ಬೇಕು ಎಂದು ಹೇಳಿದ್ದರು.ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸೇರಿದಂತೆ ಹಲವು ಅಧಿಕಾರಿಗಳು, ಜನಪ್ರತಿನಿಧಿಗಳ ಪ್ರಯತ್ನದಿಂದ ಉತ್ಸವ ಆಚರಣೆಗೆ ವೇಗ ಸಿಕ್ಕಿದೆ. ವಿಜಯನಗರ ಸಾಮ್ರಾಜ್ಯದ ವೈಭವನ್ನು ಮರುಕಳಿಸುವ ರೀತಿಯಲ್ಲಿ ಆನೆಗೊಂದಿ ಉತ್ಸವವನ್ನು ಆಚರಿಸಲಾಗುತ್ತಿದೆ ಎಂದರು. ವಿಚಾರಗೋ ಷ್ಠಿಯ ಪ್ರಚಾರಕ್ಕೆ ಕ್ರಮ: ಉತ್ಸವದ ಅಂಗವಾಗಿ ಈ ವಿಚಾರಗೋಷ್ಠಿ ಆನೆಗೊಂದಿ ಪರಂಪರೆ ಮತ್ತು ಅಭಿವೃದ್ಧಿ ವಿಚಾರಗೋಷ್ಠಿಯಾಗಿದೆ. ವಿಚಾರಗೋಷ್ಠಿಯನ್ನ ಸಂಪೂರ್ಣವಾಗಿ ನಮ್ಮ ವಿಡಿಯೋ ಗ್ರಾಫರ್‌ಗಳು ಅದ್ಭುತವಾಗಿ ಚಿತ್ರಿಕರಣ ಮಾಡುವುದರ ಮೂಲಕ ಅದನ್ನು ಸಂಪೂರ್ಣ ವಾಗಿ ಇಡೀ ಕರ್ನಾಟಕ ರಾಜ್ಯಾದಂತ ಮತ್ತು ಬೇರೆ ಬೇರೆ ಭಾಳಗಳಿಗೆ ಅನುವಾದ ಮಾಡುವುದರ ಮೂಲಕ ಇಡೀ ದೇಶದಲ್ಲಿ ಈ ವಿಚಾರಗೋ ಷ್ಠಿಯನ್ನು ಪ್ರಚಾರ ಮಾಡುವ ಜವಾಬ್ದಾರಿ ತೆಗೆದುಕೊಳ್ಳುತ್ತೇನೆ ಎಂದು ಹೇಳಿದರು.ಪ್ರಾಧ್ಯಾಪಕರಾದ ಎಸ್.ಕರಿಗೂಳಿ ಅವರು ಆಶಯ ನುಡಿಗಳ ನ್ನಾಡಿ, ಆನೆಗೊಂದಿಯು ಒಂದು ಐತಿಹಾಸಿಕ ಪ್ರಸಂಗ, ಒಂದು ಸ್ಥಿತಿ ಮತ್ತು ಯಾವತ್ತೂ ಕೂಡ ಚರಿತ್ರೆಯಲ್ಲಿ ಮರೆಯೊಕೆ ಆಗದೆ ಇರುವಂತಹ ಒಂದು ವ್ಯವಸ್ತೆಯನ್ನು ಕಂಡಿರುವಂತಹ ಪ್ರದೇಶವಾಗಿದೆ. ಏಳು ಸಾಲಿನ ಗುಡ್ಡಗಳ ಮೊದಲ ಸಾಲಿನ ಪೂರ್ವದ ಸೆರಗಿನಲ್ಲಿ ದಕ್ಷೀಣಕ್ಕೆ ತುಂಗೆಯನ್ನು ಇಟ್ಟುಕೊಂಡು ಹೊಂದಿರುವಂತಹ ಪ್ರದೇಶವೆ ಈ ಆನೆಗೊಂದಿ ಪ್ರದೇಶ. ವೈಶಿಷ್ಟಪೂರ್ಣವಾದ ಇಂತಹ ಪ್ರದೇಶದಲ್ಲಿ ನೆಲೆಸಿರುವ ನಾವೇ ಧನ್ಯರು, ಐತಿಹಾಸಿಕ ಸತ್ಯಗಳನ್ನು ಇವತ್ತಿಗೆ ಸಂತತಿಗೆ ಹೇಳುವಂತಹ ಒಂದು ಕಾರ್ಯಕ್ರಮ ಮತ್ತು ಪ್ರಕ್ರಿಯೆ ಎಂದರೆ ಈ ರೀತಿಯ ಉತ್ಸವಗಳು. ಚಾರಿತ್ರಿಕ, ಸಾಂಸ್ಕೃತಿಕ ಹಾಗೂ ಆಧ್ಯಾತ್ಮಿಕ ಸಂಪತ್ತು ಜನಪದ ಶೈಲಿಯಲ್ಲಿ ಬಿಂಬಿತವಾಗಿತ್ತು ಎಂದು ಹೇಳಿದರು.ಸಂಶೋಧಕರಾದ ಡಾ.ಶರಣಬಸಪ್ಪ ಕೋಲ್ಕಾರ್ ಅವರು ವಿಚಾರಗೋ ಷ್ಠಿಯ ಅಧ್ಯಕ್ಷತೆ ವಹಿಸಿದ್ದರು. ಉಪನ್ಯಾಸ: ಸಂಶೋಧಕರಾದ ಡಾ.ಗೀತಾ ಪೊಲೀಸ್ ಪಾಟೀಲ್ ಅವರು ಆನೆಗೊಂದಿ–ಕುಮ್ಮಟದುರ್ಗ–ವಿಜಯನಗರ ಚಾರಿತ್ರಿಕ ಪರಂಪರೆ', ಸಾಹಿತಿಗಳಾದ ಪವನ ಕುಮಾರ ಗುಂಡೂರು ಅವರು ಆನೆಗೊಂದಿ–ಕುಮ್ಮಟದುರ್ಗ–ವಿಜಯನಗರ ಸಾಂಸ್ಕೃತಿಕ ಪರಂಪರೆ, ಸಂಶೋಧಕರಾದ ಡಾ.ಸಿದ್ದಲಿಂಗಪ್ಪ ಕೊಟ್ನೆಕಲ್ ಅವರು ಕಿಷ್ಕಿಂದೆ–ಅಂಜನಾದ್ರಿ ಅಭಿವೃದ್ಧಿ ಮುನ್ನೋಟ, ಹಿರಿಯ ವರದಿಗಾರರಾದ ಕೆ.ನಿಂಗಜ್ಜ ಅವರು ಕೊಪ್ಪಳ ಜಿಲ್ಲೆಯ ಪ್ರವಾಸೋದ್ಯಮ ಸಾಧ್ಯತೆ ಮತ್ತು ಸವಾಲುಗಳು, ಕೃಷಿ ವಿಜ್ಞಾನಿಗಳಾದ ಡಾ ಎಸ್.ಎ.ಗೌಡರ್ ಅವರು ತುಂಗಭದ್ರಾ ನೀರಾವರಿ ಪ್ರದೇಶದ ಪರ್ಯಾಯ ಕೃಷಿ ಸಾಧ್ಯತೆಗಳು, ಶೈಲಜಾ ಹಿರೇಮಠ ಅವರು ಕೊಪ್ಪಳ ಜಿಲ್ಲೆಯ ಕರಕುಶಲ ಕಲೆಯ ಬೆಳವಣಿಗೆ–ಮಹಿಳೆಯ ಪಾತ್ರ ವಿಳಯಗಳ ಕುರಿತು ವಿಶೇಳ ಉಪನ್ಯಾಸ ನೀಡಿದರು.ವಿಚಾರಗೋಷ್ಠಿ ರಾಜವಂಶಸ್ಥರಾದ ಲಲಿತ ರಾಣಿ ರಂಗದೇವರಾಯಲು, ಜಿಲ್ಲಾಧಿಕಾರಿ ಗಳಾದ ನಲಿನ್ ಅತುಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿ ರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ, ಕೊಪ್ಪಳ ಉಪವಿಭಾ ಗಾಧಿಕಾರಿಗಳಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ,ಗಂಗಾವತಿ ತಹಶೀಲ್ದಾರರಾದ ಯು.ನಾಗರಾಜ,ತಾಲ್ಲೂಕು ಪಂಚಾಯತ್ ಇಓ ಲಕ್ಷ್ಮೀ ದೇವಿ ,ಆನೆಗೊಂದಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಮಹ ದೇವಿ,ಉ ಪಾಧ್ಯಕ್ಷರಾದ ಪೂರ್ಣಿಮಾ, ಗಣ್ಯರಾದ ಅರುಣಾ ಲಕ್ಷ್ಮೀ ಸೇರಿದಂತೆ ಜನಪ್ರತಿನಿಧಿಗಳು,ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿ ತರಿದ್ದರು. ಕಾರ್ಯಕ್ರಮದಲ್ಲಿ ರಾಜೇಶ್ವರಿ ಸುರೇಶ, ಜಗನ್ನಾಥ್ ದೇಸಾಯಿ, ರಾಮ್ ಮೂರ್ತಿ ನವಲಿ, ನಾಗರಾಜ ಇಂಗಳಗಿ, ಪ್ರಸನ್ನ ದೇಸಾಯಿ, ಸುದರ್ಶನ್ ವರ್ಮ,ರಮೇಶ್ ಕುಲಕರ್ಣಿ,ಮಹೇಶ್ ಸಿಂಗನಾಳ,ಮಂ ಜುನಾಥ್ ದರೋಜಿ,ಹನುಮಂತಪ್ಪ, ಶಂಶಾದ್ ಬೇಗಂ,ಪಂಪಣ್ಣ ನಾಯಕ, ಅರ್ಜುನ ನಾಯಕ,ವಿರುಪಾಕ್ಷ ನಾಯಕ, ರಾಜೇಶ ರೆಡ್ಡಿ, ಜೀಲಾನ್ ಫಾಶಾ ಖಾದ್ರಿ, ಮಲ್ಲಿಕಾರ್ಜುನ ನಂದಾಪೂರ ವೈ, ರಾಮಣ್ಣ ನಾಯಕ ಬಳ್ಳಾರಿ, ಚನ್ನಬಸವ ಜೇರೆನ್, ರಾಮೇಶ ಕೋಟಿ, ಚಂದ್ರಶೇಖರ ಶೆಟ್ಟಿ,ದೇವಪ್ಪ ವಮಾಳೆ ಕಿ.,ಟಿ.ಜಿ ಬಾಬು,ವಿಶ್ವನಾಥ ಬೆಳಗಲ್ ಮಠ, ಎಸ್.ಎಂಪಟೇಲ್,ಎಂ.ಜೆ ಶ್ರೀನಿವಾಸ,ಕೆ.ಮಲ್ಲಿಕಾರ್ಜುನ ಸಣಾಪುರ, ಪ್ರವೀಣ ಪೊಲೀಸ್ ಪಾಟೀಲ್, ಶಾಹೀನ್ ಕೌಸರ್ ಹಾಗೂ ಮತ್ತಿತರರು ಪಾಲ್ಗೊಂಡಿದ್ದರು.

## ಸರಕಾರಿ ಬಸ್ಸಿಗೆ ಸಿಲುಕಿ ಜೀವ ಬಿಟ್ಟ ಅಜ್ಜಿ

ಬೆಳಗಾವಿ.–:ಸರಕಾರಿ ಬಸ್ಸಿನ ಹಿಂಬಾಗದಲ್ಲಿ ಚಕ್ರಕ್ಕೆ ಸಿಲುಕಿ ಜೀವ ಬಿಟ್ಟ ಅಜ್ಜಿ ಸಿಗ್ನಲ್ ಬಿಟ್ಟಿತೆಂದು ಚಾಲಕ ಬಸ್ ಚಲಾಯಿಸುವಾಗ ಸಿಲುಕಿ ಸಾವನ್ನಪ್ಪಿದ ಅಜ್ಜಿ ಬೆಳಗಾವಿ ಚೆನ್ನಮ್ಮ ವೃತ್ತದಲ್ಲಿ ನಡೆದ ಘಟನೆ ಬೇರೆ ಗ್ರಾಮದಿಂದ ಬೆಳಗಾವಿ ನಗರಕ್ಕೆ ಬಂದಿದ್ದ ಅಜ್ಜಿಗೆ 60 ವರ್ಷ ವಯಸ್ಸು ಎಂದು ಅಂದಾಜಿಸಲಾಗಿದೆ.ಎಡಗಡೆಯಿಂದ ಬಲಗಡೆ ದಾಟಿ ಹೋಗುವಾಗ ಬಸ್ಸಿನ ಹಿಂಬಾಗದ ಚಕ್ರಕ್ಕೆ ಸಿಲುಕಿದ ಅಜ್ಜಿ ಸಾವು ಚಕ್ರಕ್ಕೆ ಸಿಲುಕಿ ಸ್ಥಳದಲ್ಲೆ ಸಾವನ್ನಪ್ಪಿದ ಅಜ್ಜಿ ಸ್ಥಳಕ್ಕೆ ದೌಡಾಯಿಸಿದ ಸ್ಥಳೀಯ ಪೊಲೀಸರು ಬೆಳಗಾವಿ ಮಾರ್ಕೆಟ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಘಟನೆ. ಅಜ್ಜಿ ಶಾಹುನಗರದ ಶಾಲನ ದೇಶಾಯಿ ಎನ್ನುವ ಮಾಹಿತಿ ತಿಳಿದು ಬಂದಿದೆ.

## ಸುರೇಶ ಯಾದವ ಫೌಂಡೇಶನ್‌ದಿಂದ ನಿವೃತ್ತ ಸೈನಿಕ ಕೆಂಪಣ್ಣ ಅವರಿಗೆ ಸನ್ಮಾನ

# ಸೈನಿಕರು ದೇಶದ ಆಸ್ತಿ: ಸುರೇಶ ಯಾದವ




ಬೆಳಗಾವಿ: ಇಲ್ಲಿನ ರಾಮತೀರ್ಥ ನಗರದ ಶ್ರೀ ವೀರಭದ್ರ ದೇವಸ್ಥಾನದ ಆವರಣದಲ್ಲಿ ರಾಮತೀರ್ಥ ನಗರದ ರಹವಾಸಿಗಳ ಸಂಘ ಹಾಗೂ ಸುರೇಶ ಯಾದವ ಫೌಂಡೇಶನ್ ವತಿಯಿಂದ ಭಾರತೀಯ ಸೇನೆಯಲ್ಲಿ ಸುದೀರ್ಘ 22 ವರ್ಷ ಸೇವೆ ಸಲ್ಲಿಸಿ ಸೇವಾನಿವೃತ್ತಿಯಾಗಿ ತಾಯ್ನಾಡಿಗೆ ಆಗಮಿಸಿರುವ ಹವಾಲ್ದಾರ್ ಕೆಂಪಣ್ಣ ಜನರಾಳ ಅವರನ್ನು ಅದ್ದೂರಿಯಾಗಿ ಬರಮಾಡಿಕೊಂಡು, ಸನ್ಮಾನಿಸಲಾಯಿತು. ಈ ವೇಳೆ ಸುರೇಶ ಯಾದವ ಅವರು ಮಾತನಾಡಿ, ದೇಶಕ್ಕಾಗಿ ಹಗಲಿರುಳು ಸೇವೆ ಸಲ್ಲಿಸುವ ಸೈನಕರು ದೇಶದ ಆಸ್ತಿ, ತಮ್ಮ ಕುಟುಂಬಸ್ಥರು ತೊರೆದು ಭಾರತಮಾತೆ ಸೇವೆಯನ್ನು ಮಾಡುತ್ತಾರೆ. ಇದಲ್ಲದೆ ಅವರು ತಮ್ಮ ವ್ಯಯಕ್ತಿಕ ಹಿತಾಸಕ್ತಿಗಿಂತ ದೇಶದ ಹಿತಾಶಕ್ತಿಯಲ್ಲಿ ಇರಿಸುವ ಅತ್ಯಂತ ನಿಸ್ವಾರ್ಥ ಜನರು. ಶ್ರೇಷ್ಠ ಸೈನಕರಾಗಲು ಅಸಾಧಾರಣ ಗುಣಗಳನ್ನು ಹೊಂದಿರಬೇಕು. ಯಾವಾಗಲೂ ಕ್ಷಗಳ ನಡುವೆಯೂ ತಮ್ಮ ಕರ್ತವ್ಯವನ್ನು ಪೂರೈಸಿ ಇವತ್ತು ತಮ್ಮ ತಾಯ್ನಾಡಿಗೆ ಬಂದಿದ್ದಾರೆ ಅವರ ನಿವೃತ್ತಿ ಜೀವನವು ಸುಖಕರವಾಗಿರಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಗುರುಪುತ್ರಪ್ಪ ತೋರಗಲ್, ಅಪ್ಪಯ್ಯ ಕೋಲ್ಕಾರ್, ಬಾಳಪ್ಪ ಹಂಜಿ, ಬಾಳಪ್ಪ ಬಳೋಬಾಳ, ನಿಂಗಪ್ಪಾ ಬಣಗಾರ, ರಾಜು ಸನದಿ(ರಫಾ), ಸಿದರಾಯಿ ಶೆಗೆಹಳ್ಳಿ, ರಾಜಶೇಖರ ಸೇಂದ್ರಿ, ರಾಜು ಪಾಟೀಲ, ನಿಂಗಾಪ್ಪ ಕರೆಪ್ಪಗೋಳ, ಸಂತೋಷ ಮೇರಾಕಾರ, ಗೂಳಪ್ಪ ಹೋಳಾಚಿ, ಬಸವರಾಜ ಕುಂದರಗಿ, ನಿರ್ವಾಣಿ ಬೆಣ್ಣಿ, ನಾರಾಯಣ ಕುಮಟೇಕರ ಮಲ್ಹರ ಡಿಕ್ಸಿತ್, ಮಹದೇವ ತೋನ್ನೇ, ಶ್ರೀಶೈಲ್ ಹಿರೇಮಠ, ಮುತ್ತು ಬಂದ್ಯೆ ಅಕ್ಷಯ, ಅಭ್ಷೇಕ, ಶಿವಲಿಂಗ, ಬಂದಾಯಿ, ಶ್ರೀಮಂತ್ ಗುತ್ತಿ ಕುಟುಂಬದವರು ಹಾಗೂ ರಾಮತೀರ್ಥ ನಗರದ ರಹವಾಸಿಗಳು ಉಪಸ್ಥಿತರಿದ್ದರು

# ಬೆಟಗೇರಿಯ ಕೆ.ಎಚ್.ಪಾಟೀಲ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಮಹಿಳಾ) ನಾಮಕರಣದ ಉದ್ಘಾಟನಾ ಸಮಾರಂಭ

ಗದಗ ಮಾರ್ಚ 11: ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಗದಗ ಬೆಟಗೇರಿಯ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಮ)ಯಿಂದ ಕೆ.ಎಚ್.ಪಾಟೀಲ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ( ಮಹಿಳಾ) ನಾಮಕರಣದ ಉದ್ಘಾಟನಾ ಸಮಾರಂಭವು ಬೆಟಗೇರಿಯ ಕಣಗಿನಹಾಳ ರಸ್ತೆಯಲ್ಲಿ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಮಾರ್ಚ 12 ರಂದು ಬೆಳಿಗ್ಗೆ 9 ಗಂಟೆಗೆ ಜರುಗಲಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ವೈದ್ಯಕೀಯ ಶಿಕ್ಷಣ , ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಶ್ರೀಮತಿ ಉಷಾ ದಾಸರ, ನಗರಸಭೆ ಉಪಾಧ್ಯಕ್ಷೆ ಶ್ರೀಮತಿ ಸುನಂದಾ ಬಾಕಳೆ, ಭೂ ದಾನಿಗಳಾದ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಅಪರ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಉಮಾ ಮಹಾದೇವನ್, ವಾಣಿಜ್ಯ ತೆರಿಗೆ ಇಲಾಖೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಸಿ. ಶಿಖಾ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಆಯುಕ್ತರಾದ ಡಾ.ರಾಗಪ್ರೀಯ ಆರ್, ಜಿಲ್ಲಾಧಿಕಾರಿಗಳಾದ ವೈಶಾಲಿ.ಎಂ.ಎಲ್. ಜಿಲ್ಲಾ ಪೋಲಿಸ್ ವರಿಷ್ಟಾಧಿಕಾರಿಗಳಾದ ಬಿ.ಎಸ್. ನೇಮಗೌಡ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ನಿರ್ದೇಶಕರಾದ ಚಿದಾನಂದ, ಬೆಳಗಾವಿ ವಿಭಾಗೀಯ ಕಛೇರಿಯ ಜಂಟಿ ನಿರ್ದೇಶಕರಾದ ಬಸವಪ್ರಭು ಹಿರೇಮಠ, ಗದಗ ಬೇಟಗೇರಿ ಐ.ಎಂ.ಸಿ ಐಟಿಐ ಚೇರಮನ್ನರಾದ ಸತೀಶ ಕುಲಕರ್ಣಿ ಆಗಮಿಸುವರು. ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರರು/ ಕಾರ್ಯದರ್ಶಿಗಳಾದ ಡಾ.ಮಲ್ಲೂರು ಬಸವರಾಜ ಸರ್ವರಿಗೂ ಸ್ವಾಗತ ಕೋರಿದ್ದಾರೆ.

GADI KANNADIGA,kannada daily, printed, published , edited, & woned by murugesh b.shivapuji ,printed ,plot no:12,sy no:174/3b,press colony,kuvempu nagar, post:hindalaga-591108,Tq & Dt:belgaum, And published at plot no:12,sy no:174/3b,press colony,kuvempu nagar,post:hindalaga-591108,Tq & Dt:belgaum, karnataka, RNI NO:KAR KAN/2003/10452. Permission to post at Belagavi, Kacheri post office Belagavi. No:PMG/KA/NK/BM/743/24-26